**ಓ.ಎಸ್. ನಂಬರ್ : 63/2021**

ಪಿ .ಡಬ್ಲ್ಯೂ : 1

ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು

ದಿನಾಂಕ : 23.03.2023

**ಮುಂದುವರೆದ ಪಾಟೀ ಸವಾಲು : ಶ್ರೀ ಜೆ ಕೆ ವಕೀಲರಿಂದ ಪ್ರತಿವಾದಿ ಪರವಾಗಿಃ**

ನಿ ಪಿ 18 ರ ಹದ್ದು ಬಸ್ಸು ಸರ್ವೆ ವರದಿಯಲ್ಲಿ ಏನೇನು ಬರೆದಿದೆ ಎಂದು ನಾನು ತಿಳಿದುಕೊಂಡಿಲ್ಲ. ಅದರಲ್ಲಿ ಆಸ್ತಿ ಇರುವ ಬಗ್ಗೆ ನಮೂದಿಸಿದ್ದಾರೆ. ನಿ ಪಿ 18 ರಲ್ಲಿ ಪ್ರತಿವಾದಿಗಳು ದಾವಾ ಆಸ್ತಿಯ ಸ್ವಾಧೀನದಲ್ಲಿದ್ದಾರೆ ಎಂದು ನಮೂದು ಇರುವುದಿಲ್ಲ ಅಂದರೆ ಸರಿಯಲ್ಲ. ಪ್ರತಿವಾದಿಗಳು ದಾವಾ ಆಸ್ತಿಯ ಸ್ವಾಧೀನದಲ್ಲಿದ್ದಾರೆ ಎಂದು ನಾನು ಹಾಜರುಪಡಿಸಿದ ಸರ್ವೆ ವರದಿಯಲ್ಲಿ ನಮೂದಾಗಿರುವುದಿಲ್ಲ ಅಂದರೆ ಸರಿಯಲ್ಲ. ಪ್ರತಿವಾದಿಗಳು ದಾವಾ ಆಸ್ತಿಯ ಸ್ವಾಧೀನದಲ್ಲಿದ್ದಾರೆಂದು ಪೂರಕ ದಾಖಲಾತಿಗಳನ್ನು ಹಾಜರುಪಡಿಸಿದೇ ಇರುವುದರಿಂದ ದಾವಾದಲ್ಲಿ ಕೇಳಿದ ಪರಿಹಾರವನ್ನು ಪಡೆಯಲು ನಾವು ಅರ್ಹರಲ್ಲ ಅಂದರೆ ಸರಿಯಲ್ಲ. ನಾನು ಹಾಜರುಪಡಿಸಿದ ನಿ ಪಿ 18 ರ ಸರ್ವೆ ವರದಿಗೂ ಈ ದಾವೆಗೂ ಯಾವುದೇ ಸಂಬಂಧ ಇಲ್ಲ ಅಂದರೆ ಸರಿಯಲ್ಲ.

**ಮರುವಿಚಾರಣೆ: ಇರುವುದಿಲ್ಲ**

ಸಾಕ್ಷಿಯ ಹೇಳಿಕೆಯನ್ನು ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು.

ಓ.ಹೇ.ಕೇ.ಸರಿ ಇದೆ

ಸಹಿ/-

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂಡಾಧಿಕಾರಿಗಳು,
ಸೋಮವಾರಪೇಟೆ.